## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಹಾಗೂ ಔಷಧ ನಿಯಂತ್ರಣ ಇಲಾಖೆಗಳನ್ನು ವಿಲೀನಗೊಳಿಸಿ ಆಯುಕ್ತರು, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ (FDA) ಎಂದು ಪದನಾಮೀಕರಿಸುವ ಕುರಿತು.

**ಓದಲಾಗಿದೆ:-** 1) ಸರ್ಕಾರದ ಕಡತ ಸಂಖ್ಯೆ: ಹೆಚ್‌ಎಫ್‌ಡಬ್ಲ್ಯೂ/178/ ಐಎಂಎಂ/2022 ಮತ್ತು ಭಾಗ-2.
2) ಆಯುಕ್ತರು, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಇವರ ಪತ್ರ ಸಂಖ್ಯೆ: ಹೆಚ್‌ಎಫ್‌ಡಬ್ಲ್ಯೂ/FSSD/Admin/ Margining/13/2024-25, ದಿನಾಂಕ:29/10/2024.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ಮತ್ತು (2)ರ ಕಡತ ಮತ್ತು ಪತ್ರದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಡಿಯಲ್ಲಿ ಔಷಧ ನಿಯಂತ್ರಣ ಇಲಾಖೆ ಹಾಗೂ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಗಳು ಕಾರ್ಯನಿರ್ವಹಿಸುತ್ತಿವೆ. ಔಷಧ ನಿಯಂತ್ರಣ ಇಲಾಖೆ ಒಂದು ಸ್ವತಂತ್ರ ಇಲಾಖೆಯಾಗಿ 1956 ರಿಂದ ಕಾರ್ಯನಿರ್ವಹಿಸುತ್ತಿದೆ. ಔಷಧ ನಿಯಂತ್ರಕರು ಇದರ ಮುಖ್ಯಸ್ಥರಾಗಿ ಔಷಧ ಮತ್ತು ಕಾಂತಿವರ್ಧಕ ಅಧಿನಿಯಮ 1940 ಮತ್ತು ನಿಯಮಾವಳಿಗಳು ಹಾಗೂ ಔಷಧಿಗಳಿಗೆ ಸಂಬಂಧಪಟ್ಟಂತೆ ಇತರೆ ನಿಯಮಗಳನ್ನು ನಿಯಂತ್ರಣ ಕ್ರಮಗಳನ್ನು ಕೈಗೊಂಡು ಉತ್ತಮ ಗುಣಮಟ್ಟದ ಸುರಕ್ಷತಾ ಹಾಗೂ ಪರಿಣಾಮಕಾರಿ ಔಷಧಿಗಳನ್ನು ನಿಯಂತ್ರಿತ ಬೆಲೆಗಳಲ್ಲಿ ಗ್ರಾಹಕರಿಗೆ ದೊರಕುವಂತೆ ಮಾಡುವುದೇ ಔಷಧ ನಿಯಂತ್ರಣ ಇಲಾಖೆಯ ಮುಖ್ಯ ಉದ್ದೇಶವಾಗಿರುತ್ತದೆ. ಅಲ್ಲದೇ, ಸದರಿ ಇಲಾಖೆಯಲ್ಲಿ ಆಡಳಿತ ಮತ್ತು ಅಮಲುಜಾರಿ, ಔಷಧ ಪರೀಕ್ಷಾ ಪ್ರಯೋಗಾಲಯ ಹಾಗೂ ಫಾರ್ಮಸಿ ಶಿಕ್ಷಣ ವಿಭಾಗಗಳು ಸಹ ಕಾರ್ಯನಿರ್ವಹಿಸುತ್ತಿರುತ್ತವೆ.

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ 2006ರ ಪ್ರಕಾರ ಕಾರ್ಯನಿರ್ವಹಿಸುತ್ತಿದ್ದು, ಆಯುಕ್ತರು, ಜಂಟಿ ಆಯುಕ್ತರು, ಉಪ ಆಯುಕ್ತರು ಹಾಗೂ ಅವರ ಅಧೀನದಲ್ಲಿ ಜಿಲ್ಲಾ ಮಟ್ಟದಲ್ಲಿ ಅಂಕಿತಾಧಿಕಾರಿಗಳು, ಆಹಾರ ಸುರಕ್ಷತಾಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದಾರೆ. ಅಲ್ಲದೇ, 04 ವಿಭಾಗೀಯ ಆಹಾರ ಪ್ರಯೋಗಾಲಯಗಳು ಅಂದರೆ ಬೆಂಗಳೂರು, ಬೆಳಗಾವಿ, ಕಲಬುರಗಿ ಹಾಗೂ ಮೈಸೂರು ವಿಭಾಗಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದು ಅದರಡಿಯಲ್ಲಿ ಮುಖ್ಯ ಆಹಾರ ವಿಶ್ಲೇಷಕರು, ಆಹಾರ ವಿಶ್ಲೇಷಕರು, ಕಿರಿಯ ಆಹಾರ ವಿಶ್ಲೇಷಕರು ಕಾರ್ಯನಿರ್ವಹಿಸುತ್ತಿದ್ದಾರೆ. ಆಯುಕ್ತಾಲಯ ಹಾಗೂ ಇದರಡಿಯಲ್ಲಿ ಬರುವ ಆಡಳಿತ ಕಚೇರಿಗಳಲ್ಲಿ ಸಹಾಯಕ ಆಡಳಿತಾಧಿಕಾರಿಗಳು, ಸಹಾಯಕ ಸಾಂಖ್ಯಿಕ ಅಧಿಕಾರಿಗಳು, ಕಚೇರಿ ಅಧೀಕ್ಷಕರು, ಪ್ರಥಮ ದರ್ಜೆ ಸಹಾಯಕರು ಮತ್ತು ದ್ವಿತೀಯ ದರ್ಜೆ ಸಹಾಯಕರು ಕರ್ತವ್ಯ ನಿರ್ವಹಿಸುತ್ತಿದ್ದಾರೆ.

.....2

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯು ರಾಜ್ಯದಲ್ಲಿ ಆಹಾರ ಕಲಬೆರಕೆ ತಡಗಟ್ಟುವುದು, ಉತ್ತಮ ಗುಣಮಟ್ಟದ ಆಹಾರ ದೊರೆಯುವಂತೆ ಮಾಡುವುದು ಹಾಗೂ ಪೌಷ್ಠಿಕಾಂಶಭರಿತ ಆಹಾರವನ್ನು ಸಾರ್ವಜನಿಕರಿಗೆ ತಲುಪುವಂತೆ ಕ್ರಮವಹಿಸುವ ಉದ್ದೇಶ ಹೊಂದಿರುತ್ತದೆ.

ಆಹಾರ ಉದ್ದಿಮೆಗಳ ತಯಾರಿಕೆ / ಸಂಗ್ರಹ / ವಿತರಣೆ / ಮಾರಾಟಗಳಿಗೆ ಪರವಾನಿಗಿ ಮತ್ತು ನೊಂದಣಿ ನೀಡಲು ಕ್ರಮವಹಿಸುತ್ತದೆ, ಕ್ಷೇತ್ರ ಮಟ್ಟದಿಂದ ಸಮೀಕ್ಷಾ ಮತ್ತು ಕಾನೂನಾತ್ಮಕ ಆಹಾರ ಮಾದರಿಗಳನ್ನು ಸಂಗ್ರಹಿಸಿ ಪ್ರಯೋಗಾಲಯಗಳಲ್ಲಿ ವಿಶ್ಲೇಷಣೆಗೊಳಪಡಿಸಿ ಗುಣಮಟ್ಟದ ಬಗ್ಗೆ ಖಾತ್ರಿಪಡಿಸಿಕೊಂಡು ಗುಣಮಟ್ಟವಲ್ಲದ / ಅಸುರಕ್ಷತೆ ಎಂದು ಕಂಡುಬಂದಲ್ಲಿ ಕಾನೂನು ರೀತಿ ಕ್ರಮ ಕೈಗೊಳ್ಳಲಾಗುತ್ತದೆ.

ಮುಂದುವರೆದು, ಜಮ್ಮು ಕಾಶ್ಮೀರ, ಗುಜರಾತ್, ಉತ್ತರ ಪ್ರದೇಶ, ಅಸ್ಸಾಂ, ಹರಿಯಾಣ, ರಾಜಸ್ಥಾನ, ಮಹಾರಾಷ್ಟ್ರ ಮತ್ತು ತಮಿಳುನಾಡು ರಾಜ್ಯಗಳಲ್ಲಿ ಈಗಾಗಲೇ ಔಷಧ ನಿಯಂತ್ರಣ ಇಲಾಖೆ ಹಾಗೂ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಗಳು ಆಯುಕ್ತರು, ಆಹಾರ ಸುರಕ್ಷತೆ ಮತ್ತು ಔಷಧ ನಿಯಂತ್ರಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವುದರಿಂದ ರಾಜ್ಯದಲ್ಲಿಯೂ ಸಹ ಔಷಧ ನಿಯಂತ್ರಣ ಇಲಾಖೆ ಮತ್ತು ಆಹಾರ ಸುರಕ್ಷತೆ ಇಲಾಖೆಗಳನ್ನು ವಿಲೀನಗೊಳಿಸುವುದು ಅಗತ್ಯವಾಗಿರುತ್ತದೆ.

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಹಾಗೂ ಔಷಧ ನಿಯಂತ್ರಣ ಇಲಾಖೆಯ ಕಾರ್ಯವೈಖರಿಗಳು ಬಹುತೇಕ ಒಂದೇ ರೀತಿಯಲ್ಲಿದ್ದು, ಸಾರ್ವಜನಿಕರಿಗೆ ಉತ್ತಮ ಗುಣಮಟ್ಟದ ಆಹಾರ ಹಾಗೂ ಔಷಧಿಗಳು ಲಭ್ಯವಾಗುವಂತೆ ಕಾರ್ಯನಿರ್ವಹಿಸುತ್ತಿವೆ. ಆದುದರಿಂದ, ಆಯುಕ್ತರು, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಇವರ ಅಧೀನದಲ್ಲಿ ಔಷಧ ನಿಯಂತ್ರಣ ಇಲಾಖೆಯನ್ನು ವಿಲೀನಗೊಳಿಸುವುದರಿಂದ ಸಾರ್ವಜನಿಕರಿಗೆ ಇನ್ನು ಹೆಚ್ಚಿನ ಪರಿಣಾಮಕಾರಿಯಾಗಿ ಗುಣಾತ್ಮಕ ಸೌಲಭ್ಯಗಳನ್ನು ಒದಗಿಸಲು ಸಾಧ್ಯವಾಗುತ್ತದೆ. ಹಾಗಾಗಿ, ಔಷಧ ನಿಯಂತ್ರಣ ಇಲಾಖೆಯನ್ನು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯಲ್ಲಿ ವಿಲೀನಗೊಳಿಸಿ, ಆಯುಕ್ತರು, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ **(FDA)** ಎಂದು ಮರು ಪದನಾಮೀಕರಿಸಿ, ಆಯುಕ್ತರನ್ನು ಇಲಾಖಾ ಮುಖ್ಯಸ್ಥರೆಂದು ಪರಿಗಣಿಸಲು ಹಾಗೂ ಎರಡು ಇಲಾಖೆಗಳ ಎಲ್ಲಾ ಅಧಿಕಾರಿ ಮತ್ತು ಸಿಬ್ಬಂದಿಗಳು ಇಲಾಖಾ ಮುಖ್ಯಸ್ಥರ ಅಧೀನದಲ್ಲಿ ಕರ್ತವ್ಯ ನಿರ್ವಹಿಸುವ ಸಂಬಂಧದ ಪ್ರಸ್ತಾವನೆಯನ್ನು ಪ್ರಸ್ತಾಪಿಸಲಾಗಿದೆ.

ಮೇಲಿನ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಹಾಗೂ ಔಷಧ ನಿಯಂತ್ರಣ ಇಲಾಖೆಯ ಕಾರ್ಯವೈಖರಿಗಳು ಬಹುತೇಕ ಒಂದೇ ರೀತಿಯಲ್ಲಿರುವುದರಿಂದ ಈ ಎರಡು ಇಲಾಖೆಗಳನ್ನು ವಿಲೀನಗೊಳಿಸಿ, ಆಯುಕ್ತರು, ಆಹಾರ ಸುರಕ್ಷತೆ ಮತ್ತು ಔಷಧ ನಿಯಂತ್ರಣ ಇಲಾಖೆ ಎಂದು ಮರು ಪದನಾಮೀಕರಿಸುವುದರಿಂದ ಇಲಾಖೆಯ ಕಾರ್ಯಗಳನ್ನು ಸುಗಮವಾಗಿ ಹಾಗೂ



13/12/24

ಪರಿಣಾಮಕಾರಿಯಾಗಿ ನಿರ್ವಹಿಸಲು ಸಾಧ್ಯವಾಗುತ್ತದೆಂದು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 178 ಐಎಂಎಂ 2022 (ಭಾಗ-2), ಬೆಂಗಳೂರು, ದಿನಾಂಕ: 13.12.2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಹಾಗೂ ಔಷಧ ನಿಯಂತ್ರಣ ಇಲಾಖೆಗಳನ್ನು ವಿಲೀನಗೊಳಿಸಿ ಆಯುಕ್ತರು, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ (FDA) ಎಂದು ಪದನಾಮೀಕರಿಸಿ ಆದೇಶಿಸಿದೆ.

ಆಯುಕ್ತರು, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಇವರನ್ನು ಆಯುಕ್ತರು, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ (FDA) ಇಲಾಖೆಯ ಮುಖ್ಯಸ್ಥರನ್ನಾಗಿ (HoD) ನೇಮಿಸಿ ಆದೇಶಿಸಿದೆ.

ಆಯುಕ್ತರು, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ (FDA) ಇವರ ಆಡಳಿತಾತ್ಮಕ ನಿಯಂತ್ರಣದಡಿಯಲ್ಲಿ ಎರಡು ಇಲಾಖೆಗಳ ಎಲ್ಲಾ ಅಧಿಕಾರಿ ಮತ್ತು ಸಿಬ್ಬಂದಿಗಳು ಕಾರ್ಯನಿರ್ವಹಿಸತಕ್ಕದ್ದು.

ಮುಂದುವರೆದು, ಮೇಲ್ಕಂಡ ಆದೇಶದ ಹಿನ್ನೆಲೆಯಲ್ಲಿ, ಉದ್ಭವಿಸಬಹುದಾದ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ (FDA) ಇಲಾಖೆಯ ಬದಲಾವಣೆಗಳಿಗೆ ಸಂಬಂಧಿಸಿದಂತೆ ವೃಂದ ಮತ್ತು ನೇಮಕಾತಿ ನಿಯಮಗಳ ರಚನೆ, ಕಾಯ್ದೆ/ನಿಯಮ ಹಾಗೂ ಇನ್ನಿತರೆ ವಿಷಯಗಳಿಗೆ ಅಗತ್ಯ ತಿದ್ದುಪಡಿಗಳನ್ನು ತರುವ ಸಂಬಂಧ ಸೂಕ್ತ ಪ್ರಸ್ತಾವನೆಗಳನ್ನು ತಕ್ಷಣವೇ ಸರ್ಕಾರಕ್ಕೆ ಸಲ್ಲಿಸಲು ಆಯುಕ್ತರು, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ (FDA) ಇವರಿಗೆ ಸೂಚಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: FD 710 EXP-5 2024, ದಿನಾಂಕ: 06/12/2024 ರಲ್ಲಿ ನೀಡಿರುವ ಸಹಮತಿ ಮೇರೆಗೆ ಮತ್ತು ಸಚಿವ ಸಂಪುಟ ಪ್ರಕರಣ ಸಂಖ್ಯೆ: ಸಿ.699/2024 ರಲ್ಲಿ ನೀಡಿರುವ ಅನುಮೋದನೆಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

13/12/24

(ದಿನಕರನ್ ವೈ.)
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರ),
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಆಪ್ರೈಪ ಮತ್ತು ಸಮನ್ವಯ)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ &ಎಸ್.ಎಸ್.ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್‌ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.

2. Chief Executive Officer, FSSAI, FDA Bhavan, Kotla Road, Near Bal Bhawan, New Delhi-110002. (E-mail ceo@fssai.gov.in)
3. Drugs Controller General (India), Central Drugs Standard Organisation, Ministry of Health & Family Welfare, FDA Bhavan, Kotla Road, New Delhi-110002. (E-mail dci@nic.in)
4. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಕುಷ್ಟರೋಗ ಆಸ್ಪತ್ರೆ ಆವರಣ, ಮಾಗಡಿ ರಸ್ತೆ, ಬೆಂಗಳೂರು.
5. ಆಯುಕ್ತರು, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು-01.
6. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
7. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಕುಷ್ಟರೋಗ ಆಸ್ಪತ್ರೆ ಆವರಣ, ಮಾಗಡಿ ರಸ್ತೆ, ಬೆಂಗಳೂರು.
8. ಸರ್ಕಾರದ ಅಪರ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ, ವಿಧಾನಸೌಧ, ಬೆಂಗಳೂರು (ಸಚಿವ ಸಂಪುಟ ನಿರ್ಣಯ ಸಂಖ್ಯೆ: ಸಿ 699/2024)
9. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
10. ಸರ್ಕಾದರ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಆಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
11. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಕಾನೂನು ಇಲಾಖೆ, ವಿಧಾನ ಸೌಧ, ಬೆಂಗಳೂರು.
12. ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನ ಸೌಧ, ಬೆಂಗಳೂರು.
13. ಸರ್ಕಾರದ ಕಾರ್ಯದರ್ಶಿ, ಯೋಜನಾ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ಬಹು ಮಹಡಿಗಳ ಕಟ್ಟಡ, ಬೆಂಗಳೂರು.
14. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-5), ವಿಧಾನಸೌಧ, ಬೆಂಗಳೂರು.
15. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

<u>ಪ್ರತಿ ಮಾಹಿತಿಗಾಗಿ:</u>

1. ಮಾನ್ಯ ಮುಖ್ಯ ಮಂತ್ರಿಗಳ ಅಪರ ಮುಖ್ಯ ಕಾರ್ಯಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು
3. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿ, ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು
4. ಸರ್ಕಾರದ ಅಪರ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ-1&2 / ಉಪ ಕಾರ್ಯದರ್ಶಿ-4 ರವರ ಆಪ್ತ ಸಹಾಯಕರು, ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು